# ಅಂಗಡಿ ಪತ್ನಿಗೆ ಬೆಳಗಾವಿ ಟಿಕೆಟ್

26/3/21

## ಮಸ್ಕಿಗೆ ಪ್ರತಾಪ್ ಗೌಡ, ಬಸವಕಲ್ಯಾಣಕ್ಕೆ ಬಿಜೆಪಿ ಶರಣು


ಮಂಗಳಾ ಅಂಗಡಿ


ಪ್ರತಾಪ್ ಗೌಡ


ಶರಣು ಸಲಗಾರ


ಕೆ.ರತ್ನಪ್ರಭಾ

**ಬೆಂಗಳೂರು:** ರಾಜ್ಯದ ಎರಡು ವಿಧಾನಸಭೆ ಹಾಗೂ ಒಂದು ಲೋಕಸಭಾ ಕ್ಷೇತ್ರದ ಉಪಚುನಾವಣೆಗೆ ಬಿಜೆಪಿ ಅಭ್ಯರ್ಥಿಗಳನ್ನು ಘೋಷಿಸಿದೆ. ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಸುರೇಶ್ ಅಂಗಡಿ ಅವರ ಪತ್ನಿ ಮಂಗಳಾ ಸುರೇಶ್ ಅಂಗಡಿ, ಮಸ್ಕಿಯಲ್ಲಿ ಪ್ರತಾಪಗೌಡ ಪಾಟೀಲ್, ಬಸವಕಲ್ಯಾಣದಲ್ಲಿ ಶರಣು ಸಲಗಾರ ಅವರಿಗೆ ಟಿಕೆಟ್ ನೀಡಲಾಗಿದೆ. ಹಾಗೆಯೇ, ಆಂಧ್ರಪ್ರದೇಶದ ತಿರುಪತಿಗೂ ಟಿಕೆಟ್ ಘೋಷಣೆಯಾಗಿದ್ದು ಇಲ್ಲಿ ರಾಜ್ಯದ ನಿವೃತ್ತ ಮುಖ್ಯ ಕಾರ್ಯದರ್ಶಿ ಕೆ.ರತ್ನಪ್ರಭಾ ಅವರಿಗೆ ಟಿಕೆಟ್ ಸಿಕ್ಕಿದೆ.

ವಿಶೇಷವೆಂದರೆ, ಮಂಗಳಾ ಅಂಗಡಿ, ಶರಣು ಸಲಗಾರ ಇದೇ ಮೊದಲ ಬಾರಿಗೆ ಸ್ಪರ್ಧೆ ಮಾಡುತ್ತಿದ್ದಾರೆ.

ಕೇಂದ್ರದಲ್ಲಿ ರೈಲು ಖಾತೆಯ ರಾಜ್ಯ ಸಚಿವರಾಗಿದ್ದ ಸುರೇಶ್ ಅಂಗಡಿಯವರ ಅಕಾಲಿಕ ಮರಣದಿಂದ ತೆರವಾಗಿದ್ದ ಬೆಳಗಾವಿ ಲೋಕಸಭಾ ಕ್ಷೇತ್ರಕ್ಕೆ ಅವರ ಕುಟುಂಬದರಿಗೆ ಟಿಕೆಟ್ ನೀಡಬೇಕು




ಎಂಬ ಬಗ್ಗೆ ದೊಡ್ಡಮಟ್ಟದ ಚರ್ಚೆಯಾಗಿತ್ತು. ಅಲ್ಲದೆ, ಅನುಕಂಪದ ಆಧಾರದಲ್ಲಿ ಸುಲಭ ಜಯ ಸಾಧಿಸಬಹುದು ಎಂಬ ವಿಶ್ಲೇಷಣೆಯನ್ನು ಬಿಜೆಪಿ ವಲಯದಲ್ಲಿ ಮಾಡಲಾಗಿತ್ತು. ಅದರಂತೆ ಮಂಗಳಾ ಸುರೇಶ್ ಅಂಗಡಿಯವರಿಗೆ ಟಿಕೆಟ್ ನೀಡಲಾಗಿದೆ. ಹಾಗೆಯೇ ಶಾಸಕರಾಗಿದ್ದಾಗಲೇ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿರುವ ಪ್ರತಾಪಗೌಡ ಪಾಟೀಲ್ ಅವರಿಗೂ ನಿರೀಕ್ಷೆಯಂತೆ ಬಿಜೆಪಿಯಿಂದ ಮಸ್ಕಿ ಕ್ಷೇತ್ರದಲ್ಲಿ ಟಿಕೆಟ್ ನೀಡಲಾಗಿದೆ.

ಇನ್ನು ಬಸವಕಲ್ಯಾಣ ಕ್ಷೇತ್ರದಲ್ಲಿ ಅಚ್ಚರಿಯ ಆಯ್ಕೆ ಎಂಬಂತೆ ಜಿಲ್ಲಾಮಟ್ಟದಲ್ಲಿ ಪಕ್ಷದ ಜವಾಬ್ದಾರಿ ಹೊಂದಿದ್ದ ಲಿಂಗಾಯತ ಸಮುದಾಯದ ಶರಣು ಸಲಗಾರ ಅವರಿಗೆ ಟಿಕೆಟ್ ನೀಡಲಾಗಿದೆ. ಈ ಕ್ಷೇತ್ರದಲ್ಲಿ ಲಿಂಗಾಯತ ಸಮುದಾಯದ ಓಟು ನಿರ್ಣಾಯಕ ಎಂದೂ ಹೇಳಾಗುತ್ತಿದೆ. ಅಲ್ಲದೆ, ಈ ಕ್ಷೇತ್ರದಲ್ಲಿ ರಾಜ್ಯ ಬಿಜೆಪಿ ಉಪಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಸ್ಪರ್ಧಿಸುವ ಸಾಧ್ಯತೆಯಿತ್ತು ಎಂದು ಹೇಳಾಗಿತ್ತು.

ಅದೇ ರೀತಿಯಲ್ಲಿ ಆಂಧ್ರದ ತಿರುಪತಿ ಲೋಕಸಭಾ ಕ್ಷೇತದಲ್ಲಿ ಕರ್ನಾಟಕ ನಿವೃತ್ತ ಮುಖ್ಯ ಕಾರ್ಯದರ್ಶಿ ಕೆ.ರತ್ನಾ ಪ್ರಭಾ ಅವರಿಗೆ ಟಿಕೆಟ್ ನೀಡಲಾಗಿದೆ.